# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

5

ಇಲಾಖೆ / ವಿಷಯ : DEPARTMENT / SUBJECT: ಮುಖ್ಯಮಂತ್ರಿ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ    ದಿನಾಂಕ : DATE : 15/4/2021

# ವಾರಾಂತ್ಯದಲ್ಲೂ ಲಾಕ್‌ಡೌನ್ ಪ್ರಸ್ತಾವ ಇಲ್ಲ: ಯಡಿಯೂರಪ್ಪ

ಪ್ರಜಾವಾಣಿ ವಾರ್ತೆ 15-4-21

ಬೆಂಗಳೂರು: 'ಕೊರೊನಾ ನಿಯಂತ್ರಣಕ್ಕೆ ವಾರಾಂತ್ಯ ಲಾಕ್‌ಡೌನ್ ಅಥವಾ ಕರ್ಫ್ಯೂ ವಿಧಿಸುವ ಪ್ರಸ್ತಾವ ಸರ್ಕಾರದ ಮುಂದಿಲ್ಲ. ಅದನ್ನು ಜಾರಿ ಮಾಡದೆಯೇ ಮತ್ತಷ್ಟು ಬಿಗಿ ಕ್ರಮ ಕೈಗೊಳ್ಳಲಾಗುವುದು' ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದರು.

ಸುದ್ದಿಗಾರರ ಜತೆ ಬುಧವಾರ ಬೆಳಿಗ್ಗೆ ಮಾತನಾಡಿದ ಅವರು, 'ಕೋವಿಡ್ ಬಗ್ಗೆ ಚರ್ಚಿಸಲು ಇದೇ 18ರಂದು ಸರ್ವ ಪಕ್ಷಗಳ ನಾಯಕರ ಸಭೆ ಕರೆಯಲಾಗಿದೆ. ಲಾಕ್‌ಡೌನ್ ಹೇರುವುದನ್ನು ಬಿಟ್ಟು ಉಳಿದ ಕ್ರಮಗಳ ಬಗ್ಗೆ ಈ ಸಭೆಯಲ್ಲಿ ಸಮಗ್ರವಾಗಿ ಚರ್ಚಿಸಿ ಸೂಕ್ತ ತೀರ್ಮಾನ ಕೈಗೊಳ್ಳಲಾಗುವುದು. ಮಹಾರಾಷ್ಟ್ರದಲ್ಲಿ ಕೈಗೊಂಡಿರುವ ಕ್ರಮಗಳ ಬಗ್ಗೆಯೂ ಚರ್ಚಿಸುತ್ತೇವೆ' ಎಂದು ಹೇಳಿದರು.

'ಈಗಾಗಲೇ ಏಳು ಜಿಲ್ಲೆಗಳ ನಗರಗಳು ಮತ್ತು ಮಣಿಪಾಲದಲ್ಲಿ ಏಪ್ರಿಲ್ 20ರವರೆಗೆ ರಾತ್ರಿ ಕರ್ಫ್ಯೂ ಜಾರಿಗೊಳಿಸಲಾಗಿದೆ. ಅಗತ್ಯ ಬಿದ್ದರೆ ಅದನ್ನು ವಿಸ್ತರಿಸುವ ಮತ್ತು ಇನ್ನೂ 2-3 ಜಿಲ್ಲೆಗಳಲ್ಲಿ ರಾತ್ರಿ ಕರ್ಫ್ಯೂ ವಿಧಿಸುವ ಕುರಿತು ಚಿಂತನೆ ನಡೆಸಲಾಗುವುದು' ಎಂದೂ ಅವರು ಹೇಳಿದರು.

10ನೇ ಪುಟ ನೋಡಿ

**ರಾಜ್ಯ ಕೋವಿಡ್ ಅಂಕಿ-ಅಂಶ**

| | |
|---|---|
| 10,94,912 | ಒಟ್ಟು ಸೋಂಕಿತರು (10,74,869 ಮೊನ್ನೆಯ ವಿವರ) |
| 85,480 | ಸಕ್ರಿಯ ಪ್ರಕರಣಗಳು |
| 9,96,367 | ಗುಣಮುಖರಾದವರು |
| 13,046 | ಒಟ್ಟು ಸಾವು |

**ದಿನದ ಏರಿಕೆ**

| | |
|---|---|
| ಹೊಸ ಪ್ರಕರಣ | 11,265 |
| ಗುಣಮುಖ | 4,364 |
| ಸಾವು | 38 |

506 ಐಸಿಯುನಲ್ಲಿ ಇರುವವರು

ಆಧಾರ: ರಾಜ್ಯ ಆರೋಗ್ಯ ಇಲಾಖೆ
ಪ್ರಜಾವಾಣಿ ಗ್ರಾಫಿಕ್ಸ್

## ಮಹಾರಾಷ್ಟ್ರದಲ್ಲಿ ನಿಷೇಧಾಜ್ಞೆ

ನವದೆಹಲಿ (ಪಿಟಿಐ): ಕೋವಿಡ್ ಹರಡುವಿಕೆ ತಡೆಯುವ ಉದ್ದೇಶದಿಂದ ಮಹಾರಾಷ್ಟ್ರ ಸರ್ಕಾರವು ರಾಜ್ಯದಲ್ಲಿ ಹಲವು ಕಠಿಣ ನಿರ್ಬಂಧಗಳನ್ನು ವಿಧಿಸಿದೆ. ಮುಂಬೈ ಸೇರಿದಂತೆ ರಾಜ್ಯದಾದ್ಯಂತ ಮೇ 1ರವರೆಗೆ ನಿಷೇಧಾಜ್ಞೆ ಘೋಷಿಸಲಾಗಿದೆ. ಐದು ಜನರು ಒಂದೇ ಕಡೆ ಸೇರುವುದನ್ನು ನಿರ್ಬಂಧಿಸಿದೆ. 15 ದಿನಗಳ ಕಾಲ ಕರ್ಫ್ಯೂ ರೀತಿಯ ಸ್ಥಿತಿ ಇರಲಿದೆ.

ಎಲ್ಲಾ ಸಾರ್ವಜನಿಕ ಸ್ಥಳಗಳು, ಚಟುವಟಿಕೆಗಳು, ಸೇವೆಗಳು ಬಂದ್ ಆಗಲಿವೆ. ಕಾರಣವಿಲ್ಲದೆ ಯಾರೂ ಸಾರ್ವಜನಿಕ ಸ್ಥಳಗಳಿಗೆ ಭೇಟಿ ನೀಡುವಂತಿಲ್ಲ ಎಂದು ಮುಂಬೈ ಪೊಲೀಸರು ತಿಳಿಸಿದ್ದಾರೆ. ಅಗತ್ಯ ಸೇವೆಗಳಿಗೆ ವಿನಾಯಿತಿ ಇದೆ.

ಇನ್ನಷ್ಟು ಸುದ್ದಿಗಳು 3, 3A, 10

6

# ವಾರಾಂತ್ಯದಲ್ಲೂ ಲಾಕ್‌ಡೌನ್ ಪ್ರಸ್ತಾವ ಇಲ್ಲ: ಯಡಿಯೂರಪ್ಪ

ಪ್ರ. ವಾ. 15-4-21

ಒಂದನೇ ಪುಟದಿಂದ...

ಗುಂಪುಗೂಡುವಿಕೆಗೆ ಕಡಿವಾಣ: 'ಕೊರೊನಾ ನಿಯಂತ್ರಿಸಲು ಜನರು ಅನಾವಶ್ಯಕವಾಗಿ ಗುಂಪು ಸೇರುವುದನ್ನು ನಿಲ್ಲಿಸಬೇಕು. ಜನ ಸೇರುವ ಸ್ಥಳಗಳಲ್ಲಿ ಕಡಿವಾಣ ಹಾಕಲು ನಿರ್ಧರಿಸಿದ್ದೇವೆ' ಎಂದು ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ಹೇಳಿದರು.

ಸುದ್ದಿಗಾರರ ಜತೆ ಮಾತನಾಡಿದ ಅವರು, 'ಕೋವಿಡ್ ನಿಯಂತ್ರಣಕ್ಕೆ ಸಂಬಂಧಿಸಿದ ಮಾರ್ಗಸೂಚಿಯಲ್ಲಿ ಆ ಎಲ್ಲ ವಿಚಾರಗಳನ್ನು ತಿಳಿಸುತ್ತೇವೆ' ಎಂದರು.

'ಆಸ್ಪತ್ರೆಗಳಲ್ಲಿ ಬೆಡ್‌ಗಳನ್ನು ಸಿದ್ಧ ಮಾಡುತ್ತಿದ್ದೇವೆ. ಲಸಿಕೆ ಹೆಚ್ಚಳ ಮಾಡುತ್ತಿದ್ದೇವೆ. ಕೊರೊನಾ ನಿಯಂತ್ರಣ ಕೇವಲ ಸರ್ಕಾರ ಮಾಡುವ ಕೆಲಸ ಅಲ್ಲ. ಮಹಾರಾಷ್ಟ್ರದಲ್ಲಿ ಕೂಡಾ ಬಹಳಷ್ಟು ಕ್ರಮ ತೆಗೆದುಕೊಳ್ಳುತ್ತಿದ್ದಾರೆ. ರಾಜ್ಯದಲ್ಲಿ ಕೊರೊನಾದಿಂದ ಸಾವಿಗೀಡಾಗುವವರ ಪ್ರಮಾಣ ಹೆಚ್ಚುತ್ತಿದೆ. ಹೀಗಾಗಿ ಮತ್ತಷ್ಟು ಬಿಗಿ ಕ್ರಮ ತೆಗೆದುಕೊಳ್ಳಬೇಕಿದೆ' ಎಂದರು.

## 'ಕುಂಭ ಮೇಳಕ್ಕೆ ನಿಜಾಮುದ್ದೀನ್ ಮರ್ಕಜ್ ಹೋಲಿಕೆ ಸರಿಯಲ್ಲ'

**ಡೆಹ್ರಾಡೂನ್:** ಕಳೆದ ವರ್ಷದ ದೆಹಲಿಯ ನಿಜಾಮುದ್ದೀನ್ ಮರ್ಕಜ್ ಪ್ರಕರಣದೊಂದಿಗೆ ಕುಂಭ ಮೇಳವನ್ನು ಹೋಲಿಕೆ ಮಾಡುತ್ತಿರುವ ಬಗ್ಗೆ ಉತ್ತರಾಖಂಡ ಸಿಎಂ ತೀರಥ್ ಸಿಂಗ್ ರಾವತ್ ಅಸಮಾಧಾನ ವ್ಯಕ್ತಪಡಿಸಿರುವಂತೆ ದೇಶದಾದ್ಯಂತ ವ್ಯಾಪಕ ಟೀಕೆ ವ್ಯಕ್ತವಾಗಿದೆ.

ಆದರೆ ಕುಂಭ ಮೇಳದಲ್ಲಿ ಬುಧವಾರವೂ ಲಕ್ಷಾಂತರ ಮಂದಿ ಯಾವುದೇ ಅಂತರ ಕಾಪಾಡಿಕೊಳ್ಳದೆ ಪವಿತ್ರ ಸ್ನಾನ ಮಾಡಿದ್ದಾರೆ.

ಲಕ್ಷಾಂತರ ಜನರು ಅಂತರವಿಲ್ಲದೆ, ಒಟ್ಟಿಗೆ ನದಿಯಲ್ಲಿ ಸ್ನಾನ ಮಾಡಿರುವುದು ಹಾಗೂ ಸಾಲುಗಟ್ಟಿರುವುದು ಸಾಮಾಜಿಕ ಮಾಧ್ಯಮಗಳಲ್ಲಿ ಚರ್ಚೆಗೆ ಗ್ರಾಸವಾಗಿದೆ. ಕೋವಿಡ್-19 ಪ್ರಕರಣಗಳು ಏರಿಕೆಯಾಗುತ್ತಿರುವ ಸಮಯದಲ್ಲಿ ಇಂಥ ನಡವಳಿಕೆಗಳಿಂದ ಇನ್ನಷ್ಟು ಅಪಾಯ ಎದುರಾಗಬಹುದೆಂದು ಹಲವು ಮಂದಿ ಆತಂಕ ವ್ಯಕ್ತಪಡಿಸಿದ್ದಾರೆ. ಇನ್ನೂ ಕೆಲವರು ನಿಜಾಮುದ್ದೀನ್ ಮರ್ಕಜ್‌ನಲ್ಲಿ ನಡೆದಿದ್ದ ಧಾರ್ಮಿಕ ಸಭೆಗೆ ಹೋಲಿಸಿ ವಿಶ್ಲೇಷಣೆ ಮಾಡಿದ್ದಾರೆ. ಕಳೆದ ವರ್ಷ ನಿಷೇಧಾಜ್ಞೆಯ ನಡುವೆಯೂ ನೂರಾರು ಮಂದಿ ಮರ್ಕಜ್‌ನಲ್ಲಿ ಸೇರಿದ್ದರು ಹಾಗೂ ತಬ್ಲಿಗಿ ಜಮಾತ್‌ನ ಹಲವು ಸದಸ್ಯರಿಗೆ ಕೊರೊನಾ ವೈರಸ್ ಸೋಂಕು ತಗುಲಿತ್ತು.

## ಯೋಗಿ, ಅಖಿಲೇಶ್‌ಗೆ ಕೋವಿಡ್ ದೃಢ

ಲಖನೌ: ಉತ್ತರ ಪ್ರದೇಶ ಮುಖ್ಯಮಂತ್ರಿ ಯೋಗಿ ಆದಿತ್ಯನಾಥ ಹಾಗೂ ಎಸ್‌ಪಿ ನಾಯಕ ಅಖಿಲೇಶ್ ಯಾದವ್ ಅವರಿಗೆ ಕೋವಿಡ್ ದೃಢಪಟ್ಟಿದೆ.

ಒಡಿಶಾದ ಪಿಪಿಲಿ ವಿಧಾನಸಭಾ ಕ್ಷೇತ್ರದ ಉಪಚುನಾವಣೆಯ ಕಾಂಗ್ರೆಸ್ ಅಭ್ಯರ್ಥಿ ಅಜಿತ್ ಮಂಗರಾಜ ಅವರು ಕೋವಿಡ್‌ನಿಂದ ಮೃತಪಟ್ಟಿದ್ದಾರೆ. ಈ ಕ್ಷೇತ್ರಕ್ಕೆ ಏ.17ರಂದು ಮತದಾನ ನಿಗದಿಯಾಗಿದೆ.

**10 ರಾಜ್ಯಗಳಲ್ಲೇ ಹೆಚ್ಚು:** ಈವರೆಗೆ ದೃಢಪಟ್ಟ ಪ್ರಕರಣಗಳಲ್ಲಿ ಶೇ 82ರಷ್ಟು ಕರ್ನಾಟಕ ಸೇರಿದಂತೆ 10 ರಾಜ್ಯಗಳಲ್ಲಿಯೇ ಇವೆ. ಮಹಾರಾಷ್ಟ್ರದಲ್ಲಿ ಅತ್ಯಂತ ಹೆಚ್ಚು ಪ್ರಕರಣಗಳಿವೆ. ಬುಧವಾರ ಬೆಳಿಗ್ಗೆ 8 ಗಂಟೆಯವರೆಗಿನ 24 ತಾಸುಗಳಲ್ಲಿ 1.84 ಲಕ್ಷ ಸೋಂಕಿತರು ಪತ್ತೆಯಾಗಿದ್ದಾರೆ. ಈ ಪೈಕಿ ಮಹಾರಾಷ್ಟ್ರವೊಂದರಲ್ಲೇ 60,212 ಪ್ರಕರಣ ಕಂಡುಬಂದಿವೆ.